ಉಪಾಧ್ಯಕ್ಷರು : ಪ್ರಸ್ತಾಪ ಏನೆಂದರೆ : "2005ರ ಕರ್ನಾಟಕ ಭೂಸುಧಾರಣಾ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ "ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ: ' ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೇ, "2005ರ ಕರ್ನಾಟಕ ಭೂಸುಧಾರಣಾ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ: "2005ರ ಕರ್ನಾಟಕ ಭೂಸುಧಾರಣಾ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು.

ಈ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2005

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೇ, ಸನ್ಮಾನ್ಯ ಮುಖ್ಯಮಂತ್ರಿಗಳ ಪರವಾಗಿ, 2005ರ ಬೆಂಗಳೂರು ಅಭಿವೃದ್ಧಿ

ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಜೆ.ಸಿ. ಮಾಧುಸ್ವಾಮಿ : ಇದರಲ್ಲಿ ಏನೂ ಇಲ್ಲ. 20 ಲಕ್ಷ ರೂಪಾಯಿಗಳನ್ನು ಬಿ.ಡಿ.ಎ. ಕಮೀಷನ್ ಖರ್ಚು ಮಾಡಬಹುದು ಎನ್ನುವುದನ್ನು 50 ಲಕ್ಷ ರೂ.ಗಳವರೆಗೆ ಹೆಚ್ಚಿಗೆ ಮಾಡಲು ಅನುಮತಿ ಕೇಳಿದ್ದಾರೆ. ಇದು ಆಗಬಹುದು ಎಂದು ಕಾಣುತ್ತದೆ. ನಮ್ಮದೇನೂ ಅಭ್ಯಂತರವಿಲ್ಲ.

ಶ್ರೀ ಎಂ.ಪಿ. ಪ್ರಕಾಶ್ : ಇದು ಬಹಳ ಸರಳವಾಗಿರತಕ್ಕ ತಿದ್ದುಪಡಿ. 20 ಲಕ್ಷ ರೂ.ಗೆ ಬದಲು 50 ಲಕ್ಷ ರೂಪಾಯಿಗಳನ್ನು ಖರ್ಚು ಮಾಡುವುದಕ್ಕೆ ತಂದಿದ್ದೇವೆ. ಆಡಳಿತಾತ್ಮಕ ಮಂಜೂರಾತಿಯನ್ನು ಕೊಡುವುದಕ್ಕೆ ಅವರಿಗೆ ಅಧಿಕಾರವನ್ನು ಕೊಡತಕ್ಕಂಥದ್ದು. 20 ಲಕ್ಷ ರೂ.ಗೆ ಬದಲು 50 ಲಕ್ಷ ರೂ. ಎಂದು ಮಾಡಿದೆ. ಇದನ್ನು ಒಪ್ಪಬಹುದು ಎಂದು ಕಾಣುತ್ತದೆ.

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ.ಪಿ. ಪ್ರಕಾಶ್(ಕಂದಾಯ ಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೇ, "2005ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು:

ಖಂಡ 2

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ "ಖಂಡ 2 ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ:

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೆ, "2005ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ:

"2005ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು.

5. ಅಧ್ಯಕ್ಷರ ಅಪ್ಪಣೆ ಮೇರೆಗೆ

(ಅ) ವಿಷಯ: ಸಹಕಾರಿ ಸಕ್ಕರೆ ಕಾರ್ಖಾನೆಗಳು ಅಕ್ರಮ ವ್ಯವಹಾರಗಳಿಂದ ನಷ್ಟ ಅನುಭವಿಸುತ್ತಿರುವ ಬಗ್ಗೆ.

ಉಪಾಧ್ಯಕ್ಷರು : ಮಾನ್ಯ ಈಶ್ವರಪ್ಪನವರು ಇಲ್ಲ, ಗಮನ ಸೆಳೆಯುವ ಸೂಚನೆ ಇದೆ.

ಶ್ರೀ ಎ.ಟಿ.ರಾಮಸ್ವಾಮಿ (ಅರಕಲಗೂಡು) : ಸನ್ಮಾನ್ಯ ಉಪಾಧ್ಯಕ್ಷರೆ, ಈಗ ಅರ್ಧ ಗಂಟೆ ಕಾಲಾವಧಿ ಚರ್ಚೆ ಇತ್ತು, ಅದನ್ನು ಬಿಟ್ಟು ಮುಂದೆ ಹೋದಿರಿ. ದಯಮಾಡಿ ಕಾರ್ಯಕಲಾಪದ ಪಟ್ಟಿಯಂತೆ ವಿಷಯ ತೆಗೆದುಕೊಳ್ಳಬೇಕೆಂದು ವಿನಂತಿ ಮಾಡುತ್ತೇನೆ.

ಉಪಾಧ್ಯಕ್ಷರು : ಅದರಲ್ಲಿದೆ ಇದು. ಗಮನ ಸೆಳೆಯುವ ಸೂಚನೆಗಳು.....

ಶ್ರೀ ಎ.ಟಿ.ರಾಮಸ್ವಾಮಿ : ಇದೆ. ಮತ್ತೆ ಹಿಂದಕ್ಕೆ ಹೋಗಿ ಬಿಡುತ್ತೀರಿ. ನಿನ್ನೆ ದಿವಸವೂ ಹಾಗೆಯೇ ಆಗಿ ಬೇರೆ ವಿಷಯಗಳು ಚರ್ಚೆ ಆಯಿತು.

ಉಪಾಧ್ಯಕ್ಷರು : ಈ ಸಬ್ಜೆಕ್ಟ್ ಇದೆ. 8ನೇ ಕಾಲಿಂಗ್ ಅಟೆನ್‌ಷನ್ ಇದೆ.

ಶ್ರೀ ಎ.ಟಿ.ರಾಮಸ್ವಾಮಿ : ಸನ್ಮಾನ್ಯ ಉಪಾಧ್ಯಕ್ಷರೆ, ಸ್ವಲ್ಪ ಈ ಕಡೆ ಕೇಳಬೇಕು. ಕಳೆದ ಅಧಿವೇಶನದಿಂದ ನಾನು ಪ್ರಯತ್ನ ಮಾಡುತ್ತಿದ್ದೇನೆ. ಎರಡು ಪ್ರಮುಖ ವಿಷಯಗಳನ್ನು ಚರ್ಚೆ ಮಾಡಲಿಕ್ಕೆ ಪ್ರಯತ್ನ ಮಾಡುತ್ತಿದ್ದೇನೆ.